ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಬ್ಲಾಕ್ ಆಗಿರುವ ಮನೆಗಳನ್ನು ಪುನರ್ ಪ್ರಾರಂಭಿಸುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

217 (291) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಆಯ್ಕೆಯಾದ ವಸತಿ ಫಲಾನುಭವಿಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿಗಳವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಮನೆಗಳನ್ನು ಸಕಾಲದಲ್ಲಿ ನಿರ್ಮಿಸಿಕೊಳ್ಳದ ಫಲಾನುಭವಿಗಳ ಮನೆಗಳು ಬ್ಲಾಕ್ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳನ್ನು ಪುನರ್ ಪ್ರಾರಂಭ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ; (ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ 2020-ಜನವರಿ 31 ವರೆಗೆ ಬ್ಲಾಕ್ ಆಗಿರುವ ಮನೆ ಹಾಗೂ ಪ್ರಾರಂಭ ಮಾಡಿರುವ ಮನೆಗಳೆಷ್ಟು ; (ಗ್ರಾಮ ಪಂಚಾಯತ್‌ವಾರು, ಫಲಾನುಭವಿಗಳವಾರು ವಿವರ ನೀಡುವುದು)

(ಈ) ಬೀದರ್ ಜಿಲ್ಲೆಯಲ್ಲಿ ಲಾಕ್-ಓಪನ್ ಮಾಡಿದ ನಂತರ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; ಫಲಾನುಭವಿಗಳಿಗೆ ಆದೇಶದ ಪತ್ರ ಒದಗಿಸಲಾಗಿದೆಯೇ ? (ಮಾಹಿತಿ ನೀಡುವುದು)